ಆದೇಶ ಹೊರಡಿಸಿದೆ. ಗ್ರಾಮೀಣ ಗೃಹ ನಿರ್ಮಾಣ ಹಾಗೂ ಕೃಷಿಯೇತರ ಚಟುವಟಿಕೆಗಳ ದೀರ್ಘಾವಧಿ ಸಾಲಕ್ಕೆ ಶೇಕಡ 0.05 ರಷ್ಟು ಸ್ಟಾಂಪ್ ಶುಲ್ಕ ಭರಿಸಬೇಕಾಗಿರುತ್ತದೆ.

ಈ) ಮೇಲಿನಂತೆ ಮುದ್ರಾಂಕ ಶುಲ್ಕ ಮತ್ತು ನೋಂದಣಿ ಶುಲ್ಕದಲ್ಲಿ ವಿನಾಯಿತಿ ನೀಡಿರುವುದರಿಂದ ಈ ಪ್ರಶ್ನೆಯೇ ಉದ್ಭವಿಸುವುದಿಲ್ಲ.

ರಾಷ್ಟ್ರೀಯ ಹೆದ್ದಾರಿ 48ರ ರಸ್ತೆ ಅಗಲೀಕರಣ

546 (105) ಶ್ರೀರಾಮಸ್ವಾಮಿಗೌಡ ಬಿ.ಬಿ. (ಕುಣಿಗಲ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್ ಪಟ್ಟಣದಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ–48 ರಸ್ತೆಯನ್ನು ಪಟ್ಟಣ ಭಾಗದಲ್ಲಿ ಅಗಲೀಕರಣ ಮಾಡುವುದಕ್ಕಾಗಿ ಇಕ್ಕೇಲಗಳಲ್ಲಿ ಅಂಗಡಿ : ಕಟ್ಟಡಗಳನ್ನು ಸ್ಥಳೀಯ ಜಿಲ್ಲಾಡಳಿತ ತೆರವುಗೊಳಿಸಿ, ನೆಲಸಮ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ತೆರವುಗೊಳಿಸಿರುವ ರಸ್ತೆಯ ಇಕ್ಕೇಲಗಳಲ್ಲಿ ಡಾಂಬರೀಕರಣವಿಲ್ಲದ ಕಾರಣ ವಾಹನ ಸಂಚಾರಕ್ಕೆ ನಗರದ ನಿವಾಸಿಗಳಿಗೆ ಪ್ರತಿನಿತ್ಯ ತೊಂದರೆಯಾಗುತ್ತಿಲ್ಲವೆ;

ಇ) ರಾಷ್ಟ್ರೀಯ ರಸ್ತೆ ಅಭಿವೃದ್ಧಿ ಪ್ರಾಧಿಕಾರ ಅಥವಾ ರಾಜ್ಯ ಸರ್ಕಾರದ ಲೋಕೋಪಯೋಗಿ ಅಥವಾ ಇತರೆ ಇಲಾಖೆಯ ಅನುದಾನಗಳ ಮುಖೇನ ಅಗಲೀಕರಣ ಹಾಗೂ ಡಾಂಬರೀಕರಣದ ಕಾಮಗಾರಿಗಳನ್ನು ಜರೂರಾಗಿ ಮಾಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಬಂದಿದೆ.

ಆ) ಉದ್ಭವಿಸುವುದಿಲ್ಲ.

ಇ) ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ಬೈಪಾಸ್ ರಸ್ತೆಯನ್ನು ನಿರ್ಮಾಣ ಮಾಡುತ್ತಿರುವುದರಿಂದ ಕುಣಿಗಲ್ ಪಟ್ಟಣದಲ್ಲಿ ಹಾದುಹೋಗುವ ರಸ್ತೆಯ ಅಗಲೀಕರಣ ಮತ್ತು ಡಾಂಬರೀಕರಣ ಮಾಡುವ ಬಗ್ಗೆ ಯಾವುದೇ ಪ್ರಸ್ತಾವನೆಯು ಲೋಕೋಪಯೋಗಿ ಇಲಾಖೆ ಹಾಗೂ ರಾಷ್ಟ್ರೀಯ ಹೆದ್ದಾರಿ ವಲಯದಿಂದ ಇರುವುದಿಲ್ಲ.